ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರು) ತಮಗೆ ಈ ದರ್ಖಾಸ್ತ್ತೀ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ—1ನೇ ಚನ್ನಬಸವಯ್ಯ, 4ನೇ ಖಾದರ್‌ಕೇಟಿ 5ನೇ ರಾಮಂಣ, 6ನೇ ಪುಟ್ಟನಾಯಕ, 7ನೇ ಬಸವೇಗೌಡ, 9ನೇ ಮಮ್ಮತ್‌ಖಾ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರೀ ನಂಜಪ್ಪನಮಗ ಕೂಗಯ್ಯನು ಹೊಂದುವದಕ್ಕೆ ಹಕ್ಕು ದಾನಾಗುವದರ ಮೂಲಕ ದಿವಾಳೀಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳೀಯಾದವನ್ನ ನಿರ್ಬಂಧದಿಂದ ವಿಮೋಚನೇ ಮಾಡಿರುವದಲ್ಲದೆ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ಕರವಾಗಿಯಾಗಲಿ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್‌ದಾರಿಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆಯೆಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ಯ 1887ನೇ ಇಸವಿ ಅಕ್ಟೋಬರ್ 20ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತಿನೀ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರ್.	ಲೇಣೇದಾರು) ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಹೊಬಲಗು.	ಯಾವಾಗ ಡೇಜೀ ಆಗಿದ್ದು.	ದೇಣಿಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿಯೇನಾದರೂ ಇದ್ದರೆ.	ರೂ.
1	ಚಾಮರಾಜನಗರ ತಾಲ್ಲೂಕು ಹರಲೇ ಗ್ರಾಮದಲ್ಲಿರುವ ಚನ್ನಬಸವಯ್ಯ ..	113—6—6	..	ಡಿಕರೀ ಬಾಬತು.	

ಸಿ. ಶ್ರೀನಿವಾಸಯ್ಯಂಗಾರ್,
ಸಬ್ ಜಡ್ಜ್.

ಫಾರೆಸ್ಟ್ ಇಲಾಖಾ.

ತಾರೀಖು 13ನೇ ಅಕ್ಟೋಬರ್ 1887.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ದರಖಾಸ್ತು ಮಂಜೂರಾದ ತಾರೀಖು ಲಾಗಾಯಿತು 1889ನೇ ಇಸವಿ ಮಾರ್ಚಿ ಆಖೈರ್‌ವರಿಗೆ ಮೈಸೂರು ಡಿಸ್ಟ್ರಿಕ್ಟು ಹುಣಸೂರು ತಾಲ್ಲೂಕು ಬಾಬತು ಈ ಕೆಳಗೆ ನಮೂದಾಗುವ ಜಂಗಲ್‌ಗಳಿಂದ ಹುಣಸೂರ ಡಿಪೋಕ್ಕೆ ಚಿಲ್ಲರೇ ಚೌಬೀನೇ ಮತ್ತು ಗಳೂ ಸಹ ಹೇರಲು ಇಷ್ಟಪಟ್ಟವರು 1887ನೇ ಇಸವಿ ನವಂಬರ್ 15ನೇ ತಾರೀಖುವರಿಗೆ ಮೈಸೂರು ಡಿಸ್ಟ್ರಿಕ್ಟು ಫಾರೆಸ್ಟು ಸೂಪರ್‌ಟೆಂಡೆಂಟ್ ಸಾಹೇಬರವರ ಆಫೀಸಿಗೆ ದರಖಾಸ್ತು ಮಾಡಬಹುದು.

ದರಖಾಸ್ತುದಾರ ತಾನು ಗಾಡೀ ಬೋಜಾ 1ಕ್ಕೆ ಯಾವ ದರದಂತೆ ಚಿಲ್ಲರೇ ಚೌಬೀನಾ ಮತ್ತು ಬಿದರುಗಳು ಹೇರಲು ಒಪ್ಪುತ್ತಾನೋ ಆ ದರವನ್ನ ದರಖಾಸ್ತಿನಲ್ಲಿ ನಮೂದಿಸಬೇಕು.

1 ವೀರನ ಹೊಸಹಳ್ಳಿ ಜಂಗಲ್
2 ಕಬಕೂನಹಳ್ಳಿ ಡಿಟೋ
3 ಆನೆಚವಕೂರು ಡಿಟೋ
4 ಬೂಣಾರೇ ಜಂಗಲ್
5 ಮಾವಕಲ್ ಡಿಟೋ

ಟಿ. ಆನಂದರಾವ್,
ಡೆಪ್ಯೂಟಿ ಕಮ್ಮಿಷನರ್.